**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ನೇವಿ-1/ಅಉಅ/315/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು, ದಿ: 02.06.2023

## ಸುತ್ತೋಲೆ

ವಿಷಯ: 2022-23ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಸಂಸ್ಕೃತ ಹಾಗೂ ಚಿತ್ರಕಲಾ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿ:09.02.2023 ಮತ್ತು 23.02.2023.

* * * * * * *

2022-23ನೇ ಶೈಕ್ಷಣಿಕ ಸಾಲಿನ ಉಳಿದ ಅವಧಿಗೆ **ಸರ್ಕಾರಿ ಸಂಸ್ಕೃತ ಕಾಲೇಜುಗಳು ಹಾಗೂ ಸರ್ಕಾರಿ ಚಿತ್ರಕಲಾ ಕಾಲೇಜುಗಳಲ್ಲಿ** ಹೆಚ್ಚುವರಿ ಕಾರ್ಯಭಾರಕ್ಕೆ ಅನುಗುಣವಾಗಿ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು **ದಿನಾಂಕ:05.06.2023 ರಂದು ಮಧ್ಯಾಹ್ನ 12:00 ಗಂಟೆಗೆ ಆನ್‌ಲೈನ್ ಕೌನ್ಸಿಲಿಂಗ್** ಅನ್ನು ಆಯೋಜಿಸಲಾಗಿದೆ. ಅದರಂತೆ, ಅರ್ಹ ಅಭ್ಯರ್ಥಿಗಳ ವಿಷಯವಾರು ಮೆರಿಟ್ ಪಟ್ಟಿಯನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಲಾಗಿದ್ದು, ಅಭ್ಯರ್ಥಿಗಳು ಮೇಲ್ಕಂಡ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಲು ತಿಳಿಸಲಾಗಿದೆ.

ಮುಂದುವರೆದು, ಅತಿಥಿ ಉಪನ್ಯಾಸಕರ ಆಯ್ಕೆಯ ಕುರಿತು ಎಲ್ಲಾ ಮಾಹಿತಿಗಳನ್ನು ಇಲಾಖೆಯ ಅಂತರ್ಜಾಲ ವಿಳಾಸ www.dce.karnataka.gov.in ನಲ್ಲಿ ಪ್ರಕಟಿಸಲಾಗುವುದು.

**ನಿರ್ದೇಶಕರು**
ಕಾಲೇಜು ಶಿಕ್ಷಣ ಇಲಾಖೆ

**ಇವರಿಗೆ; ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ:**

1) ಪ್ರಾದೇಶಿಕ ಜಂಟಿ ನಿರ್ದೇಶಕರು, ಬೆಂಗಳೂರು, ಮೈಸೂರು, ಧಾರವಾಡ.
2) ಸರ್ಕಾರಿ ಸಂಸ್ಕೃತ ಹಾಗೂ ಚಿತ್ರಕಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಸಂಬಂಧಪಟ್ಟ ಅಭ್ಯರ್ಥಿಗಳಿಗೆ – ಪ್ರಾಂಶುಪಾಲರ ಮುಖಾಂತರ.
4) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು - ಈ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
5) ಕಛೇರಿ ಪ್ರತಿ